**ಕರ್ನಾಟಕ ಸರ್ಕಾರದ ನಡವಳಿಗಳು**

**ವಿಷಯ:** 2021-22 ನೇ ಸಾಲಿನ ಆಯವ್ಯಯ ಘೋಷಣೆ -ಪ್ರತಿ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಸಂಜೀವಿನಿ ಯೋಜನೆಯ ಮಹಿಳಾ ಸ್ವ-ಸಹಾಯ ಸಂಘಗಳಿಂದ ರಚಿತವಾದ ಒಕ್ಕೂಟದ ಮೂಲಕ ಘನ ತ್ಯಾಜ್ಯ ನಿರ್ವಹಣೆಯನ್ನು ಸಮಗ್ರವಾಗಿ ಹಾಗೂ ವೈಜ್ಞಾನಿಕವಾಗಿ ಮಾಡುವ ಬಗ್ಗೆ.

**ಓದಲಾಗಿದೆ:**

1. 2021-22 ನೇ ಸಾಲಿನ ಆಯವ್ಯಯ ಘೋಷಣೆಯ ಪ್ಯಾರಾ ಸಂಖ್ಯೆ 175.
2. ಪಂಚಾಯತ್‌ರಾಜ್ ಆಯುಕ್ತಾಲಯದ ಪತ್ರ ಸಂಖ್ಯೆ: ಕಪಂರಾಆ /ಅಭಿವೃದ್ಧಿ/180/2020-2021 ದಿನಾಂಕ:29-01-2021.

**ಪ್ರಸ್ತಾವನೆ:**

ಮೇಲೆ ಓದಲಾದ(1)ರ 2021-22 ನೇ ಸಾಲಿನ ಆಯವ್ಯಯ ಘೋಷಣೆಯ ಕೈಪಿಡಿಯ ಕ್ರಮ ಸಂಖ್ಯೆ 175ರಲ್ಲಿ ಪ್ರತಿ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಸಂಜೀವಿನಿ ಯೋಜನೆಯ ಮಹಿಳಾ ಸ್ವ-ಸಹಾಯ ಸಂಘಗಳಿಂದ ರಚಿತವಾದ ಒಕ್ಕೂಟದ ಮೂಲಕ ಘನತ್ಯಾಜ್ಯ ನಿರ್ವಹಣೆಯನ್ನು ಸಮಗ್ರವಾಗಿ ಹಾಗೂ ವೈಜ್ಞಾನಿಕವಾಗಿ ಮಾಡಲು ಅವಕಾಶ ಕಲ್ಪಿಸಲಾಗಿದೆ.

ರಾಜ್ಯದ ಎಲ್ಲಾ ಗ್ರಾಮೀಣ ಕುಟುಂಬಗಳಲ್ಲಿ ಘನ ತ್ಯಾಜ್ಯವನ್ನು ವ್ಯವಸ್ಥಿತವಾಗಿ ನಿರ್ವಹಣೆ ಮಾಡಬೇಕಾದ ಅಗತ್ಯತೆಯ ಹಿನ್ನೆಲೆಯಲ್ಲಿ ಘನ ತ್ಯಾಜ್ಯ ನಿರ್ವಹಣೆಯಲ್ಲಿ ಗ್ರಾಮ ಪಂಚಾಯತಿಗಳು ಅನುಸರಿಸಬೇಕಾದ ಕ್ರಮಗಳು ಹಾಗೂ ಘನ ತ್ಯಾಜ್ಯ ನಿರ್ವಹಣೆಯ ನಿಯಮಗಳು 2016ರ ಅನುಷ್ಠಾನಕ್ಕಾಗಿ ಘನ ತ್ಯಾಜ್ಯ ನಿರ್ವಹಣೆ ವ್ಯವಸ್ಥೆ ಕಲ್ಪಿಸಲು ಸ್ವಚ್ಛ ಭಾರತ್ ಮಿಷನ್ (ಗ್ರಾಮೀಣ) ಅಡಿಯಲ್ಲಿ ಗರಿಷ್ಟ ರೂ. 20.00 ಲಕ್ಷಗಳವರೆಗೆ ತಾತ್ವಿಕ ಅನುಮೋದನೆ ನೀಡಲಾಗಿದೆ.

15 ನೇ ಹಣಕಾಸು ಆಯೋಗ ಅನುದಾನದಲ್ಲಿ ಘನ ಮತ್ತು ದ್ರವ ತ್ಯಾಜ್ಯವನ್ನು ಸಾಗಣೆ ಮಾಡಲು ವಾಹನವನ್ನು ಖರೀದಿಸುವ/ಬಾಡಿಗೆ ಪಡೆಯುವ ಬಗ್ಗೆ ತಿಳಿಸಲಾಗಿದೆ. ಗ್ರಾಮ ಪಂಚಾಯತಿ ಹಂತದ ಕಾರ್ಯಾಚರಣೆಯಲ್ಲಿ ರಾಷ್ಟ್ರೀಯ ಗ್ರಾಮೀಣ ಜೀವನೋಪಾಯ (NRLM) ಮತ್ತು ಗ್ರಾಮ ಪಂಚಾಯತಿ ಮಟ್ಟದ ಒಕ್ಕೂಟ (GPLF)ಗಳನ್ನು ಒಳಗೊಳ್ಳಲು ಅನುಸರಿಸಬೇಕಾದ ಕ್ರಮಗಳನ್ನು ಮೇಲೆ ಓದಲಾದ (2)ರ ಆದೇಶದಲ್ಲಿ ವಿವರಿಸಲಾಗಿದ್ದು, ಗ್ರಾಮ ಪಂಚಾಯತಿ ಮಟ್ಟದ ಒಕ್ಕೂಟ (ಜಿಪಿಎಲ್‌ಎಫ್)/ಮಹಿಳಾ ಸ್ವಸಹಾಯ ಸಂಘಗಳ ಜೀವನೋಪಾಯಕ್ಕೆ ಬೆಂಬಲಿಸಲು ತಿಳಿಸಲಾಗಿರುತ್ತದೆ. ಆದುದರಿಂದ, ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪಂರಾ 484 ಜಿಪಸ 2021, ದಿನಾಂಕ:04-11-2021.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಯಲ್ಲಿ, ಪ್ರತಿ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಸಂಜೀವಿನಿ ಯೋಜನೆಯ ಮಹಿಳಾ ಸ್ವ-ಸಹಾಯ ಸಂಘಗಳಿಂದ ರಚಿತವಾದ ಒಕ್ಕೂಟದ ಮೂಲಕ ಘನತ್ಯಾಜ್ಯ ನಿರ್ವಹಣೆಯನ್ನು ಸಮಗ್ರವಾಗಿ ಹಾಗೂ ವೈಜ್ಞಾನಿಕವಾಗಿ ಮಾಡಲು ಈ ಕೆಳಕಂಡ ಷರತ್ತುಗಳನ್ನು ವಿಧಿಸಿದೆ.

- ಘನ ಮತ್ತು ದ್ರವ ತ್ಯಾಜ್ಯ ನಿರ್ವಹಣೆಗಾಗಿ (SLWM) ಪ್ರಾರಂಭಿಕ ಹಂತದಿಂದ ಕೊನೆಯವರೆಗೆ ಕಾರ್ಯನಿರ್ವಹಿಸಲು ರಾಷ್ಟ್ರೀಯ ಗ್ರಾಮೀಣ ಜೀವನೋಪಾಯ ಮಿಷನ್ (NRLM) ಅಡಿ ಸಂಘಟಿಸಲಾದ ಹಾಗೂ ಸೂಕ್ತವಾದ ಗ್ರಾಮ ಪಂಚಾಯತಿ ಮಟ್ಟದ ಒಕ್ಕೂಟ (GPLF)ಗಳು/ಸ್ಥಳೀಯ ಮಹಿಳಾ ಸ್ವ-ಸಹಾಯ ಸಂಘಗಳನ್ನು ಗುರುತಿಸಬೇಕು.

- ಗುರುತಿಸಲಾದ ಸಂಘಗಳಿಗೆ ಅಬ್ದುಲ್ ನಜೀರ್‌ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಂಸ್ಥೆ, ಮೈಸೂರು (ANSSIRD) ಸಂಸ್ಥೆ, ಮೈಸೂರು ಅಥವಾ ಮಹಾತ್ಮ ಗಾಂಧಿ ಗ್ರಾಮೀಣ ಇಂಧನ ಮತ್ತು ಅಭಿವೃದ್ಧಿ ಸಂಸ್ಥೆ (MGIRED) ಅಥವಾ ಪ್ರತಿ ಜಿಲ್ಲೆಗೆ ಗುರುತಿಸಲಾದ ಅವರ ಪಾಲುದಾರ NGO ಮೂಲಕ ತರಬೇತಿ ನೀಡಲಾಗುವುದು.
- ತರಬೇತಿಯು ಪೂರ್ಣಗೊಂಡ ನಂತರ, ಜಿಲ್ಲಾ ಪಂಚಾಯಿತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿರವರ ಅಧ್ಯಕ್ಷತೆಯಲ್ಲಿ ಗ್ರಾಮ ಪಂಚಾಯಿತಿ ಹಾಗೂ ಗ್ರಾಮ ಪಂಚಾಯಿತಿ ಮಟ್ಟದ ಒಕ್ಕೂಟ ಸ್ವ-ಸಹಾಯ ಸಂಘಗಳ ನಡುವೆ ಸಮನ್ವಯ ಸಭೆಯನ್ನು ನಡೆಸಿ, MoU (ಒಡಂಬಡಿಕೆ)ನ ನಿಬಂಧನೆಗಳು ಮತ್ತು ಘನ-ದ್ರವ ತ್ಯಾಜ್ಯ ನಿರ್ವಹಣೆಯಲ್ಲಿ ಅವರ ಜವಾಬ್ದಾರಿಗಳ ಬಗ್ಗೆ ವಿವರಿಸುವುದು.
- ತದನಂತರ ಗ್ರಾಮ ಪಂಚಾಯತಿ ಹಾಗೂ ಗ್ರಾಮ ಪಂಚಾಯಿತಿ ಮಟ್ಟದ ಒಕ್ಕೂಟ ಸ್ವ-ಸಹಾಯ ಸಂಘಗಳ(GPLF/SHG)MoU ಗೆ ಸಹಿ ಹಾಕಲು ಮುಂದುವರಿಯಬಹುದು, ಕರಡು MoUನ್ನು ಇದರೊಂದಿಗೆ ಅಡಕಪಿರಿಸಿದೆ.
- ಹೀಗೆ ಗುರುತಿಸಲಾದ ಒಕ್ಕೂಟಗಳು(GPLF)/ಸ್ಥಳೀಯ ಮಹಿಳಾ ಸ್ವ-ಸಹಾಯ ಸಂಘಗಳೊಂದಿಗೆ ಗ್ರಾಮ ಪಂಚಾಯತಿಗಳಿಂದ ಘನ ಮತ್ತು ದ್ರವ ತ್ಯಾಜ್ಯ ನಿರ್ವಹಣೆಗಾಗಿ ಪರಸ್ಪರ ಒಪ್ಪಂದ ಮಾಡಿಕೊಳ್ಳಬೇಕು.
- ಈಗಾಗಲೇ ದಿನಾಂಕ:29-01-2021ರಲ್ಲಿ ತಿಳಿಸಿರುವಂತೆ 02 ಅಕ್ಟೋಬರ್ 2021 ರೊಳಗೆ ರಾಜ್ಯದ ಎಲ್ಲಾ ಹೋಬಳಿಗಳಲ್ಲಿ ಕನಿಷ್ಟ ಒಂದು ಘನ ಮತ್ತು ದ್ರವ ತ್ಯಾಜ್ಯ ನಿರ್ವಹಣಾ ಘಟಕವನ್ನು ಜಿಪಿಎಲ್‌ಎಫ್/ಮಹಿಳಾ ಸ್ವ-ಸಹಾಯ ಸಂಘಗಳು ನಿರ್ವಹಿಸುವುದು.

ಪ್ರಕ್ರಿಯೆಗಳು:

- ಜಿಪಿಎಲ್‌ಎಫ್/ಸ್ವ-ಸಹಾಯ ಸಂಘದ ಸದಸ್ಯರುಗಳಿಗೆ ಘನ ಮತ್ತು ದ್ರವ ತ್ಯಾಜ್ಯ ನಿರ್ವಹಣೆಯ ಕುರಿತು ಅಂದರೆ ತ್ಯಾಜ್ಯ ವಸ್ತುಗಳನ್ನು ಮೂಲದಲ್ಲಿಯೇ ಹಸಿ ಮತ್ತು ಒಣ ತ್ಯಾಜ್ಯ ಎಂದು ವಿಂಗಡಿಸಲು ಹಾಗೂ ಸಂಸ್ಕರಣೆ ಮಾಡಲು ಮಾಹಿತಿ, ಶಿಕ್ಷಣ, ಮನೆ ಬಾಗಿಲಿನಿಂದ ಸಂಗ್ರಹಿಸುವುದರಿಂದ ಪ್ರಾರಂಭಿಸಿ, ವಿಂಗಡಣೆ ಹಾಗೂ ವೈಜ್ಞಾನಿಕವಾಗಿ ಘನ ತ್ಯಾಜ್ಯ ವಿಲೇವಾರಿ ಮಾಡುವ ಹಂತದವರೆಗೆ ತರಬೇತಿಯನ್ನು ನೀಡುವುದು.
- ಜಿಪಿಎಲ್‌ಎಫ್/ಸ್ವ ಸಹಾಯ ಸಂಘಗಳು ಘನ ಮತ್ತು ದ್ರವ ತ್ಯಾಜ್ಯ ನಿರ್ವಹಣೆಗಾಗಿ ಸೂಕ್ತ ಪ್ರಮಾಣದ ಸ್ವಾವಲಂಬನೆ ಮತ್ತು ಆರ್ಥಿಕ ಸಾಮರ್ಥ್ಯ ಹೊಂದುವವರೆಗೆ ಗ್ರಾಮ ಪಂಚಾಯತಿಗಳು ಅವರಿಗೆ ಆರ್ಥಿಕವಾಗಿ ಬೆಂಬಲ ನೀಡುವುದು.
- ಘನ ತ್ಯಾಜ್ಯ ನಿರ್ವಹಣೆಗೆ ಬಳಕೆದಾರರ ಶುಲ್ಕ ವಿಧಿಸುವುದು ಹಾಗೂ ಮನೆಗಳು ಮತ್ತು ವಾಣಿಜ್ಯ ಸಂಸ್ಥೆಗಳಿಂದ ಸೇವಾ ಶುಲ್ಕವನ್ನು ನಿಯಮಿತವಾಗಿ ಸಂಗ್ರಹಿಸಿ, ಸಂಗ್ರಹಿಸಲಾದ ಶುಲ್ಕವನ್ನು ಘನತ್ಯಾಜ್ಯ ನಿರ್ವಹಣೆಗೆ ಬಳಸುವುದು.
- ಗ್ರಾಮ ಪಂಚಾಯತಿ ಮಟ್ಟದ ಜಿವನೋಪಾಯ ಒಕ್ಕೂಟಗಳು/ಸ್ಥಳೀಯ ಮಹಿಳಾ ಸ್ವ-ಸಹಾಯ ಸಂಘಗಳನ್ನು ಗುರುತಿಸಿ, ಗ್ರಾಮ ಪಂಚಾಯತಿ ಜೀವನೋಪಾಯ ಒಕ್ಕೂಟ (ಜಿಪಿಎಲ್‌ಎಫ್)/ ಮಹಿಳಾ ಸ್ವಸಹಾಯ ಸಂಘಗಳನ್ನು ಗ್ರಾಮ ಪಂಚಾಯತಿಗಳಲ್ಲಿ ಘನ ಮತ್ತು ದ್ರವ ತ್ಯಾಜ್ಯ ನಿರ್ವಹಣೆಯ ಪ್ರಕ್ರಿಯೆಯಲ್ಲಿ ತೊಡಗಿಸಿಕೊಂಡು ಅವರ ಜೀವನೋಪಾಯಕ್ಕೆ ಬೆಂಬಲಿಸುವುದು.
- ಜಿಪಿಎಲ್‌ಎಫ್/ಸ್ವ-ಸಹಾಯ ಸಂಘದ ಸದಸ್ಯರುಗಳು ತ್ಯಾಜ್ಯ ವಸ್ತುಗಳನ್ನು ಮೂಲದಲ್ಲಿಯೇ ಹಸಿ ಮತ್ತು ಒಣ ತ್ಯಾಜ್ಯ ಎಂದು ವಿಂಗಡಿಸಲು ಹಾಗೂ ಸಂಸ್ಕರಣೆ ಮಾಡಲು ಮನೆ ಬಾಗಿಲಿನಿಂದ ಸಂಗ್ರಹಿಸುವುದರಿಂದ ಪ್ರಾರಂಭಿಸಿ, ವಿಂಗಡಣೆ ಹಾಗೂ ವೈಜ್ಞಾನಿಕವಾಗಿ ಘನ ತ್ಯಾಜ್ಯ ವಿಲೇವಾರಿ ಮಾಡುವುದು.

- ಮಾಹಿತಿ, ಶಿಕ್ಷಣ ಮತ್ತು ಸಂವಹನ ಚಟುವಟಿಕೆಗಳನ್ನು ಹಾಗೂ ತರಬೇತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲು ಜಿಲ್ಲೆಯಲ್ಲಿ ಲಭ್ಯವಿರುವ 15ನೇ ಹಣಕಾಸು ಅನುದಾನದಲ್ಲಿ ಭರಿಸುವುದು ಹಾಗೂ ಘನ ತ್ಯಾಜ್ಯ ನಿರ್ವಹಣೆ ಅನುಷ್ಠಾನಕ್ಕಾಗಿ ಅನುದಾನದ ಕೊರತೆಯಾದಲ್ಲಿ ಗ್ರಾಮ ಪಂಚಾಯತಿ ಅನುದಾನ, ಕೇಂದ್ರ ಹಣಕಾಸು ಆಯೋಗದ ಅನುದಾನ, ಸುವರ್ಣ ಗ್ರಾಮೋದಯ, ಮಹಾತ್ಮಾ ಗಾಂಧಿ ಉದ್ಯೋಗ ಖಾತರಿ ಯೋಜನೆ (ಎಂಜಿಎನ್‌ಆರ್‌ಇಜಿಎ), ಸಂಸತ್ ಸದಸ್ಯರ ಸ್ಥಳೀಯ ಪ್ರದೇಶಾಭಿವೃದ್ಧಿ (MPLADs), ಶಾಸಕರ ಸ್ಥಳೀಯ ಪ್ರದೇಶಾಭಿವೃದ್ಧಿ (KLLADs), ಮತ್ತು ಸಾಂಸ್ಥಿಕ ಸಾಮಾಜಿಕ ಜವಾಬ್ದಾರಿ ನಿಧಿ (CSR fund) ಹಾಗೂ ವಿವಿಧ ಯೋಜನೆಯಡಿಯಲ್ಲಿನ ಅನುದಾನವನ್ನು ಒಗ್ಗೂಡಿಸಿ ಘನ ತ್ಯಾಜ್ಯ ನಿರ್ವಹಣೆಗೆ ಬಳಸಿಕೊಳ್ಳುವುದು.
- ಹಸಿ ತ್ಯಾಜ್ಯದ ಸಂಸ್ಕರಣೆಗೆ, ಸಂಪನ್ಮೂಲ ಮರುಬಳಕೆ ಮಾಡುವ ಮತ್ತು ಮರಳಿ ಪಡೆಯುವ ಸೌಲಭ್ಯಕ್ಕೆ ಸೂಕ್ತ ಸ್ಥಳವನ್ನು ಗುರುತಿಸುವುದು.
- ಒಣ ತ್ಯಾಜ್ಯ ವಸ್ತುಗಳನ್ನು ಪುನಾರಾವರ್ತಿತ, ಪುನರ್ಬಳಕೆ, ನಿಸತ್ವ ಹಾಗು ದಹನಯೋಗ್ಯ ತ್ಯಾಜ್ಯಗಳಾಗಿ ವಿಂಗಡಿಸಲು ಚಿಂದಿ ಆಯುವವರನ್ನು ತೊಡಗಿಸಿಕೊಳ್ಳಬಹುದಾಗಿರುತ್ತದೆ.
- ಪುನಾರಾವರ್ತಿತ, ಪುನರ್ಬಳಕೆಯಾಗುವ ತ್ಯಾಜ್ಯವನ್ನು ಮಾರಾಟ ಮಾಡುವುದು ಹಾಗು ದಹನ ಯೋಗ್ಯ ತ್ಯಾಜ್ಯವನ್ನು RDF (Refuse Derived Fuel) ಆಗಿ ಪರಿವರ್ತಿಸಿ, ಹತ್ತಿರದ ಸಿಮೆಂಟ್/ಇತರೆ ಕಾರ್ಖಾನೆಗಳಿಗೆ ಪರ್ಯಾಯ ಇಂಧನವಾಗಿ ಬಳಕೆ ಮಾಡುವಂತೆ ಕ್ರಮವಹಿಸುವುದು.
- ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಎಲ್ಲಿಯೂ ತ್ಯಾಜ್ಯ ವಸ್ತುಗಳನ್ನು ಸುಡಬಾರದು ಮತ್ತು ತ್ಯಾಜ್ಯ ವಸ್ತು ಸುಡುವುದನ್ನು ನಿಷೇದಿಸಿ ಅಧಿಸೂಚನೆ ಹೊರಡಿಸಿ ಸೂಚನಾ ಫಲಕದಲ್ಲಿ ಅಳವಡಿಸುವುದು.
- ಸಾವಯವ ತ್ಯಾಜ್ಯವನ್ನು ಸಂಗ್ರಹ ಮಾಡಲಾಗುವ ಸ್ಥಳದಲ್ಲಿಯೆ (ಮನೆಗಳಲ್ಲಿ/ವಾಣಿಜ್ಯ ಸಂಸ್ಥೆಗಳಲ್ಲಿ) ವಿಂಗಡಿಸುವುದು. ಒಣ ತ್ಯಾಜ್ಯ ವನ್ನು ಬೇರ್ಪಡಿಸುವುದು ಮತ್ತು ಚೂರು ಚೂರು ಪ್ಲಾಸ್ಟಿಕ್ ತ್ಯಾಜ್ಯವನ್ನು ರಸ್ತೆಗಳ ಡಾಂಬರೀಕರಣಕ್ಕೆ ಬಳಸಲು ಸರಬರಾಜು ಮಾಡುವುದು. ಮನೆಯ ಹಂತದಲ್ಲಿ ಹಸಿ ತ್ಯಾಜ್ಯವನ್ನು ಗೊಬ್ಬರವನ್ನಾಗಿಸಲು ಸಾಧ್ಯವಾಗದಿದ್ದರೆ, ಸಮುದಾಯದ ಮಟ್ಟದಲ್ಲಿ ಗೊಬ್ಬರವನ್ನಾಗಿಸುವುದು.
- 15 ನೇ ಹಣಕಾಸು ಆಯೋಗ ಅನುದಾನದಲ್ಲಿ ಘನ ಮತ್ತು ದ್ರವ ತ್ಯಾಜ್ಯವನ್ನು ಸಾಗಣೆ ಮಾಡಲು ಗ್ರಾಮ ಪಂಚಾಯತಿಯಿಂದ ಖರೀದಿಸಿದ/ಬಾಡಿಗೆ ಪಡೆದ ವಾಹನವನ್ನು ಘನ ತ್ಯಾಜ್ಯ ವಸ್ತು ಸಂಗ್ರಹಣೆ ಹಾಗೂ ಸಾಗಾಣಿಕೆಗೆ ಒಪ್ಪಂದ ಮಾಡಿಕೊಳ್ಳಲಾದ ಜಿಪಿಎಲ್‌ಎಫ್/ಸ್ವ ಸಹಾಯ ಸಂಘಗಳಿಗೆ ಒದಗಿಸುವುದು ಹಾಗೂ ಈ ವಾಹನಗಳಿಗೆ ಕಡ್ಡಾಯವಾಗಿ ಜಿಪಿಎಸ್ ಅಳವಡಿಸಿ, ವಾಹನಗಳ ಚಲನವಲನಗಳ ಬಗ್ಗೆ ಮಾಹಿತಿಯನ್ನು ಆನ್‌ಲೈನ್ ಮೂಲಕ ಪಡೆಯುವುದು.
- ಗ್ರಾಮ ಪಂಚಾಯತಿಗಳು ಘನ ತ್ಯಾಜ್ಯ ನಿರ್ವಹಣೆಗೆ ಬಳಕೆದಾರರ ಶುಲ್ಕ ವಿಧಿಸುವುದು ಹಾಗೂ ಮನೆಗಳು ಮತ್ತು ವಾಣಿಜ್ಯ ಸಂಸ್ಥೆಗಳಿಂದ ಸೇವಾ ಶುಲ್ಕವನ್ನು ನಿಯಮಿತವಾಗಿ ಸಂಗ್ರಹಿಸಲು ಒಪ್ಪಂದ ಮಾಡಿಕೊಳ್ಳಲಾದ ಜಿಪಿಎಲ್‌ಎಫ್/ಸ್ವ-ಸಹಾಯ ಸಂಘಗಳಿಗೆ ಒಪ್ಪಿಸುವುದು ಮತ್ತು ಸಂಗ್ರಹಿಸಲಾದ ಶುಲ್ಕವನ್ನು ಆಯಾ ಜಿಪಿಎಲ್‌ಎಫ್-ಸ್ವ-ಸಹಾಯ ಸಂಘಗಳಲ್ಲಿ ಉಳಿಸಿಕೊಂಡು ಘನತ್ಯಾಜ್ಯ ನಿರ್ವಹಣೆಗೆ ಬಳಸಲು ಬಿಡುವುದು.
- ಮರುಬಳಕೆ ತ್ಯಾಜ್ಯವನ್ನು ವಿಂಗಡಿಸಿ ಮಾರಾಟ ಮಾಡುವುದು ಮತ್ತು ತ್ಯಾಜ್ಯ ವಸ್ತುಗಳ ಮರುಬಳಕೆ/ ಮಾರಾಟ ಮಾಡುವ ಮೂಲಕ ದೊರೆಯುವ ಸಂಪನ್ಮೂಲಗಳನ್ನು ಸಹ ಜಿಪಿಎಲ್‌ಎಫ್/ಸ್ವ ಸಹಾಯ ಸಂಘಗಳಿಗೆ ಬಳಸಿಕೊಳ್ಳಲು ಬಿಡುವುದು.

- ರಾಷ್ಟ್ರೀಯ ಗ್ರಾಮೀಣ ಜೀವನೋಪಾಯ ಮಿಷನ್ (NRLM) ರವರು ಗ್ರಾಮ ಪಂಚಾಯತಿ ಜೀವನೋಪಾಯ ಒಕ್ಕೂಟ (ಜಿಪಿಎಲ್‌ಎಫ್)/ ಮಹಿಳಾ ಸ್ವಸಹಾಯ ಸಂಘಗಳನ್ನು ಗ್ರಾಮ ಪಂಚಾಯತಿಗಳಲ್ಲಿ ಘನ ಮತ್ತು ದ್ರವ ತ್ಯಾಜ್ಯ ನಿರ್ವಹಣೆಯ ಪ್ರಕ್ರಿಯೆಯಲ್ಲಿ ಆಸಕ್ತ ಮಹಿಳೆಯರಿಗೆ ವಾಹನ ಚಾಲನಾ ತರಬೇತಿ ನೀಡುವುದು.
- ಗ್ರಾಮೀಣ ನೀರು ಮತ್ತು ನೈರ್ಮಲ್ಯ ಇಲಾಖೆಯು ಸದರಿ ಯೋಜನೆಗೆ ಸಂಬಂಧಿಸಿದ ತಾಂತ್ರಿಕ ಬೆಂಬಲವನ್ನು ನೀಡುವುದು.
- ಸದರಿ ಇಲಾಖೆಗಳು ಮಾಸಿಕ ಸಭೆಯಲ್ಲಿ ಘನ ಮತ್ತು ದ್ರವ ತ್ಯಾಜ್ಯ ನಿರ್ವಹಣೆಯ ಪ್ರಕ್ರಿಯೆಯ ಕುರಿತು ಪ್ರಗತಿ ಪರಿಶೀಲನೆ ನಡೆಸುವುದು.
- ಜೀವನೋಪಾಯ ಒಕ್ಕೂಟ (ಜಿಪಿಎಲ್‌ಎಫ್)/ ಮಹಿಳಾ ಸ್ವಸಹಾಯ ಸಂಘಗಳನ್ನು ಗ್ರಾಮ ಪಂಚಾಯತಿಗಳಲ್ಲಿ ಘನ ಮತ್ತು ದ್ರವ ತ್ಯಾಜ್ಯ ನಿರ್ವಹಣೆಗಾಗಿ ಆಸಕ್ತಿ ಹೆಚ್ಚಿಸಲು ಉತ್ತೇಜನ ಕಾರ್ಯಕ್ರಮಗಳನ್ನು ನಡೆಸುವುದು.
- ರಾಷ್ಟ್ರೀಯ ಗ್ರಾಮೀಣ ಜೀವನೋಪಾಯ ಮಿಷನ್ (NRLM) ಮತ್ತು ಗ್ರಾಮೀಣ ನೀರು ಮತ್ತು ನೈರ್ಮಲ್ಯ ಇಲಾಖೆ (RWS) ರವರು ಘನ ಮತ್ತು ದ್ರವ ತ್ಯಾಜ್ಯ ನಿರ್ವಹಣೆ ಕುರಿತು ಮಾಸಿಕ ವರದಿಯನ್ನು ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯಕ್ಕೆ ಸಲ್ಲಿಸುವಂತೆ ತಿಳಿಸಿದೆ.

ಈ ಆದೇಶವನ್ನು 2021-22ನೇ ಸಾಲಿನ ಆಯವ್ಯಯ ಪ್ಯಾರಾ ಸಂಖ್ಯೆ 175ರಂತೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

Chetna 6/11/21
(ಚೇತನ.ಎಂ)

ಸರ್ಕಾರದ ಅಧೀನ ಕಾರ್ಯದರ್ಶಿ(ಜಿ.ಪಂ),
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

04/11/21

ಇವರಿಗೆ:

1. ಪ್ರಧಾನ ಮಹಾಲೇಖಪಾಲಕರು (ಜಿ ಅಂಡ್ ಎಸ್ ಎಸ್ ಎ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ (ಪಿ.ಬಿ.ನಂ.5398) ಬೆಂಗಳೂರು.
2. ಪ್ರಧಾನ ಮಹಾಲೇಖಪಾಲಕರು (ಇ ಅಂಡ್ ಆರ್ ಎಸ್ ಎ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ (ಪಿ.ಬಿ.ನಂ.5398) ಬೆಂಗಳೂರು
3. ಪ್ರಧಾನ ಮಹಾಲೇಖಪಾಲಕರು (ಎ ಅಂಡ್ ಇ), ಕರ್ನಾಟಕ, ಪಾರ್ಕ್‌ಹೌಸ್ ರಸ್ತೆ, (ಪಿ.ಬಿ.ನಂ.5329) ಬೆಂಗಳೂರು.
4. ಆಯುಕ್ತರು, ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯ ಕೆ.ಜಿ.ರಸ್ತೆ, ಬೆಂಗಳೂರು.
5. ಆಯುಕ್ತರು, ಖಜಾನೆ ಆಯುಕ್ತಾಲಯ, 6ನೇ ಮಹಡಿ, ಕೆ.ಪಿ.ಸಿ.ಎಲ್ ಕಟ್ಟಡ, ಅರಮನೆ ರಸ್ತೆ, ಬೆಂಗಳೂರು-560001.
6. ಅಭಿಯಾನ ನಿರ್ದೇಶಕರು, ರಾಷ್ಟ್ರೀಯ ಗ್ರಾಮೀಣ ಜೀವನೋಪಾಯ ಅಭಿಯಾನ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, 3ನೇ ಗೇಟ್, 3ನೇ ಮಹಡಿ, ಬಹು ಮಹಡಿ ಕಟ್ಟಡ ಬೆಂಗಳೂರು.
7. ನಿರ್ದೇಶಕರು ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ ಬೆಂಗಳೂರು.
8. ನಿರ್ದೇಶಕರು, ರಾಜ್ಯ ಹುಜೂರು ಖಜಾನೆ, ಬೆಂಗಳೂರು.

9. ಸರ್ಕಾರದ ಅಧೀನ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ(ವೆಚ್ಚ-6), ವಿಧಾನ ಸೌಧ, ಬೆಂಗಳೂರು.
10. ಜನರಲ್ ಮ್ಯಾನೇಜರ್, ಮಾರ್ಕೆಟಿಂಗ್ ಕಮ್ಯೂನಿಕೇಷನ್ ಅಂಡ್ ಅಡ್ವರ್ಟೈಸಿಂಗ್ ಲಿಮಿಟೆಡ್, ಎಂ ಸಿ & ಹೌಸ್, 42, ಮಿಲ್ಲರ್ಸ್ ರಸ್ತೆ, ಬೆಂಗಳೂರು-560052.
11. ಇಲಾಖಾ ವೆಬ್‌ಸೈಟ್ ನಲ್ಲಿ ಪ್ರಕಟಿಸಲು.
12. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ

<u>ಪ್ರತಿಯನ್ನು ಮಾಹಿತಿಗಾಗಿ:</u>

1. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿಗಳು,
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು(ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ಇವರ ಹಿರಿಯ ಆಪ್ತ ಕಾರ್ಯದರ್ಶಿಗಳು
3. ಆಯುಕ್ತರು, ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯ, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ಇವರ ಆಪ್ತ ಶಾಖೆಗೆ.
4. ನಿರ್ದೇಶಕರು, (ಪಂಚಾಯತ್ ರಾಜ್1&2) ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ಇವರ ಆಪ್ತ ಸಹಾಯಕರು.
5. ನಿರ್ದೇಶಕರು (ಅಭಿವೃದ್ಧಿ), ಪಂಚಾಯತ್ ರಾಜ್ ಆಯುಕ್ತಾಲಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.
6. ಉಪಕಾರ್ಯದರ್ಶಿ(ಆಡಳಿತ), ಪಂಚಾಯತ್ ರಾಜ್ ಆಯುಕ್ತಾಲಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.